**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/267/ಅರೆಕಾಲಿಕ ಉ.ಸೇ.ಸ.ಯುಜಿಸಿ ವೇವಿ/2016-17/ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 28.02.2017.

# ಸುತ್ತೋಲೆ

**ವಿಷಯ:** ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಮತ್ತು ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಕ್ರಮಗೊಂಡ ಅರೆಕಾಲಿಕ ಉಪನ್ಯಾಸಕರಿಗೆ ಯುಜಿಸಿ ವೇತನ ವಿಸ್ತರಿಸುವ ಬಗ್ಗೆ

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ:ಇಡಿ/378/ಯುಎನ್ಇ/2014,ದಿ:17.10.2016

********

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶದಲ್ಲಿ ದಿನಾಂಕ:11.07.2009ರ ಪೂರ್ವದಲ್ಲಿ ಎಂ.ಫಿಲ್ ಪದವಿಗೆ ನೋಂದಣಿ ಮಾಡಿ ನಂತರ ಪದವಿ ಪಡೆದ ಸಕ್ರಮಾತಿಗೊಂಡ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾತ್ರ ಎಂ.ಫಿಲ್ ಪದವಿ ಪಡೆದ ದಿನಾಂಕದಿಂದ ಯುಜಿಸಿ ವೇತನ ಶ್ರೇಣಿಯನ್ನು ವಿಸ್ತರಿಸಲು ಆದೇಶಿಸಿದ್ದು, ಸದರಿ ಆದೇಶದಲ್ಲಿ ಎಂ.ಫಿಲ್ ಪದವಿಯ ನೈಜತೆಯ ಬಗ್ಗೆ ಕಾಲೇಜು ಶಿಕ್ಷಣ ಆಯುಕ್ತರು ಪರಿಶೀಲಿಸತಕ್ಕದ್ದು ಎಂಬ ಷರತ್ತನ್ನು ವಿಧಿಸಿರುವ ಹಿನ್ನೆಲೆಯಲ್ಲಿ ಸದರಿ ಆದೇಶದಂತೆ ಸಕ್ರಮಾತಿಗೊಂಡ ಅರೆಕಾಲಿಕ ಉಪನ್ಯಾಸಕರುಗಳಿಗೆ ಯುಜಿಸಿ ವೇತನ ಶ್ರೇಣಿ ವಿಸ್ತರಿಸುವ ಸಂಬಂಧ ಪ್ರಸ್ತಾವನೆಗಳನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸುತ್ತಾ, ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಕೆಲವು ದಾಖಲಾತಿಗಳನ್ನು ಸಲ್ಲಿಸುವಂತೆ ದಿನಾಂಕ:06-02-2017ರ ಸುತ್ತೋಲೆಯಲ್ಲಿ ಸೂಚಿಸಲಾಗಿದ್ದು, ಆದರೆ ಸದರಿ ಸುತ್ತೋಲೆಯನ್ನು ಮುಂದಿನ ನಿರ್ದೇಶನದವರೆಗೆ ದಿನಾಂಕ: 09-02-2017ರ ಸುತ್ತೋಲೆಯನ್ವಯ ತಡೆಹಿಡಿಯಲಾಗಿತ್ತು.

ಪ್ರಸ್ತುತ ಉಲ್ಲೇಖಿತ ಸರ್ಕಾರಿ ಆದೇಶದನ್ವಯ ದಿನಾಂಕ:11.07.2009ರ ಪೂರ್ವದಲ್ಲಿ ಎಂ.ಫಿಲ್ ಪದವಿಗೆ ನೋಂದಣಿ ಮಾಡಿ ನಂತರ ಪದವಿ ಪಡೆದ ಸಕ್ರಮಾತಿಗೊಂಡ ಅರೆಕಾಲಿಕ ಉಪನ್ಯಾಸಕರುಗಳಿಗೆ ಯುಜಿಸಿ ವೇತನ ಶ್ರೇಣಿ ವಿಸ್ತರಿಸುವ ಸಂಬಂಧ ಪ್ರಸ್ತಾವನೆಗಳನ್ನು ಈ ಕಛೇರಿಗೆ ಸಲ್ಲಿಸಲು ಸೂಚಿಸುತ್ತಾ, ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಈ ಕೆಳಕಂಡ ದಾಖಲಾತಿಗಳ ದೃಢೀಕೃತ ಪ್ರತಿಗಳನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

01. ಅರೆಕಾಲಿಕ ಉಪನ್ಯಾಸಕರ ಸೇವಾ ಸಕ್ರಮಾತಿ ಆದೇಶದ ದೃಢೀಕೃತ ಪ್ರತಿ
02. ಎಂ.ಫಿಲ್ ಪದವಿಯ ನೈಜತೆಯ ಬಗ್ಗೆ ಸಂಬಂಧಪಟ್ಟ ವಿಶ್ವವಿದ್ಯಾಲಯದ ಸಕ್ಷಮ ಪ್ರಾಧಿಕಾರದ ಪ್ರಮಾಣ ಪತ್ರ

ಮುಂದುವರೆದು, ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ತಿಳಿಸಿರುವಂತೆ ಈ ಕಛೇರಿಯ ಅನುಮತಿ ಇಲ್ಲದೇ ಯುಜಿಸಿ ವೇತನ ಶ್ರೇಣಿಯನ್ನು ಸಕ್ರಮಾತಿಗೊಂಡ ಅರೆಕಾಲಿಕ ಉಪನ್ಯಾಸಕರುಗಳಿಗೆ ವಿಸ್ತರಿಸದಿರಲು ಸಹಾ ಸೂಚಿಸಿದೆ.

**"ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ,

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು ಧಾರವಾಡ ಹಾಗೂ ಕಲಬುರಗಿ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹಾಗೂ ಕಾನೂನು ಕಾಲೇಜುಗಳ ಪ್ರಾಂಶುಪಾಲರ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳು:

01. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
02. ಮ್ಯಾನೇಜರ್/ಅಧೀಕ್ಷಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ ಅಗತ್ಯ ಕ್ರಮಕ್ಕಾಗಿ.
03. ಕಛೇರಿ ಪ್ರತಿ.